# ಕರ್ನಾಟಕ ವಿಧಾನಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : **32**

1. ಸದಸ್ಯರ ಹೆಸರು : **ಶ್ರೀ ಪ್ರಕಾಶ್ ಕೆ.ರಾಥೋಡ್** (ನಾಮನಿರ್ದೇಶನ ಹೊಂದಿರುವವರು)

ಉತ್ತರಿಸುವ ದಿನಾಂಕ : 07.12.2020.

2. ಉತ್ತರಿಸುವ ಸಚಿವರು : ಮುಖ್ಯಮಂತ್ರಿ

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಸರ್ಕಾರಿ ನೌಕರರಿಗೆ ವೈದ್ಯಕೀಯ ಸೌಲಭ್ಯ ನೀಡುತ್ತಿದ್ದು, ಅರೆ ಸರ್ಕಾರಿ ನೌಕರರಿಗೆ ಸೌಲಭ್ಯ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? . | ಅರೆ ಸರ್ಕಾರಿ ನೌಕರರಿಗೆ ವೈದ್ಯಕೀಯ ಸೌಲಭ್ಯ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿರುವುದಿಲ್ಲ. |
| ಆ | ಬಂದಿದ್ದಲ್ಲಿ, ಅವರುಗಳಿಗೆ ಸದರಿ ಸೌಲಭ್ಯ ಕಲ್ಪಿಸಲು ಎಷ್ಟು ಕಾಲಾವಕಾಶ ಬೇಕಾಗುವುದು? (ಸಂಪೂರ್ಣ ವಿವರ ನೀಡುವುದು) | <u>**ಸರ್ಕಾರಿ ನೌಕರರ (ವೈದ್ಯಕೀಯ ಹಾಜರಾತಿ) ನಿಯಮಗಳು 1963**</u> ರನ್ವಯ ರಾಜ್ಯ ಸರ್ಕಾರಿ ನೌಕರರು ಹಾಗೂ ಅವರ ಕುಟುಂಬದ ಅವಲಂಬಿತ ಸದಸ್ಯರಿಗೆ ವೈದ್ಯಕೀಯ ವೆಚ್ಚ ಮರುಪಾವತಿ ಸೌಲಭ್ಯಗಳನ್ನು ಹಾಗೂ ಜ್ಯೋತಿ ಸಂಜೀವಿನಿ ಯೋಜನೆಯಡಿಯಲ್ಲಿ ಕೆಲವು ನಿಗದಿತ ಮಾರಣಾಂತಿಕ ಕಾಯಿಲೆಗಳಿಗೆ ನಗದುರಹಿತ ವೈದ್ಯಕೀಯ ಸೌಲಭ್ಯಗಳನ್ನು ನೀಡಲಾಗುತ್ತಿದೆ. ಈ ಸೌಲಭ್ಯಗಳು ರಾಜ್ಯ ಸರ್ಕಾರಿ ನೌಕರರಿಗೆ ಮಾತ್ರ ಅನ್ವಯವಾಗುತ್ತದೆ.<br>ಸ್ಥಳೀಯ ಸಂಸ್ಥೆಗಳು/ ಸ್ವಾಯತ್ತ ಸಂಸ್ಥೆಗಳು/ ನಿಗಮ/ ಮಂಡಳಿಗಳ ನೌಕರರಿಗೆ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹೊರಡಿಸುವ ನಿಯಮಗಳು ನೇರವಾಗಿ ಅನ್ವಯವಾಗುವುದಿಲ್ಲ. ಇಂತಹ ಸಂಸ್ಥೆಗಳು ಸರ್ಕಾರಿ ನೌಕರರಿಗೆ ಅನ್ವಯಿಸುವ ನಿಯಮಗಳನ್ನು ಆಯಾ ಆಡಳಿತ ಇಲಾಖೆಗಳ ಸಹಮತಿ ಮೇರೆಗೆ ಅಳವಡಿಸಿಕೊಂಡು ಅಥವಾ ತಮ್ಮದೇ ಆದ ನಿಯಮಗಳನ್ನು ರೂಪಿಸಿ ತಮ್ಮ ನೌಕರರಿಗೆ ವೈದ್ಯಕೀಯ ಸೌಲಭ್ಯಗಳನ್ನು ನೀಡುತ್ತಿವೆ. |

e-ಕಡತ ಸಂಖ್ಯೆ: DPAR/108/SMR/2020

(ಸಹಿ)

**(ಬಿ.ಎಸ್. ಯಡಿಯೂರಪ್ಪ)**
**ಮುಖ್ಯಮಂತ್ರಿ**